ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1574
2. ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ
3. ಉತ್ತರಿಸಬೇಕಾದ ದಿನಾಂಕ : 18-03-2021

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಮೇಲುಸೇತುವೆ ನಿರ್ಮಾಣ ಕಾರ್ಯ ಆರಂಭಗೊಂಡು ಎರಡು ವರ್ಷ ಕಳೆದಿದ್ದರೂ, ಕಾಮಗಾರಿ ಇದುವರೆಗೂ ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿಯ ಸ್ಥಳದಲ್ಲಿ ಭೂಸ್ವಾಧೀನ, ವಿದ್ಯುತ್ ಕಂಬಗಳ ಸ್ಥಳಾಂತರ, ಅರಣ್ಯ ಇಲಾಖೆಯ ಗಿಡಮರಗಳನ್ನು ತೆರವುಗೊಳಿಸಲು ವಿಳಂಬವಾಗಿದ್ದರಿಂದ, 2018 ಮತ್ತು 2019 ರ ಸಾಲುಗಳಲ್ಲಿ ಹೆಚ್ಚಿನ ಮಳೆಯಿಂದಾಗಿ ಹಾಗೂ 2020 ರಲ್ಲಿ ದೇಶಾದ್ಯಂತ ಲಾಕ್‌ಡೌನ್ ವಿಧಿಸಲಾಗಿದ್ದರಿಂದ ಕಾಮಗಾರಿಯು ವಿಳಂಬವಾಗಿರುತ್ತದೆ.
ಆ	ಬಂದಿದಲ್ಲಿ, ಕಾಮಗಾರಿಯ ಅಂದಾಜು ಮೊತ್ತ, ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; ಹಾಗೂ ಕಾಮಗಾರಿಯನ್ನು ಪೂರ್ಣ ಮಾಡಲು ಬೇಕಾದ ಉಳಿಕೆ ಹಣ ಪ್ರಸ್ತುತ ಲಭ್ಯ ಇದೆಯೇ;	ಕೊಡಗು ಜಿಲ್ಲೆಯ ಭಾಗಮಂಡಲದ ಹತ್ತಿರ ಮಡಿಕೇರಿ-ತಲಕಾವೇರಿ ಮತ್ತು ನಾಪೊಕ್ಲು-ತಲಕಾವೇರಿ ರಸ್ತೆಗಳ ಛೇದಕದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಮೇಲ್ಸೇತುವೆ ನಿರ್ಮಿಸುವ ಕಾಮಗಾರಿಯನ್ನು ರೂ.29.62 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಸದರಿ ಕಾಮಗಾರಿಗೆ ನಿಗದಿಪಡಿಸಿರುವ ಅನುದಾನ ಹಾಗೂ ವೆಚ್ಚದ ವಿವರ ಕೆಳಕಂಡಂತಿದೆ : *(ರೂ ಕೋಟಿಗಳಲ್ಲಿ)* ಕ್ರ.ಸಂ / ವರ್ಷ / ಅನುದಾನ / ವೆಚ್ಚ 1 / 2017-18 / 5.00 / - 2 / 2018-19 / 3.00 / 1.52 3 / 2019-20 / 3.00 / 4.14 4 / 2020-21 (ಇಲ್ಲಿಯವರೆಗೆ) / 1.00 / 4.53 ಒಟ್ಟು :- / **12.00** / **10.19** ಸದರಿ ಕಾಮಗಾರಿಗೆ ಅಗತ್ಯವಿರುವ ಅನುದಾನವನ್ನು ಒದಗಿಸಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು.
ಇ	ಮಳೆಗಾಲದಲ್ಲಿ ದ್ವೀಪದಂತಾಗುವ ಭಾಗಮಂಡಲದಲ್ಲಿ ಸಾರ್ವಜನಿಕರಿಗೆ ಹಾಗೂ ಭಕ್ತಾದಿಗಳಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸುವ ಸಲುವಾಗಿ ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?	ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿದ್ದು, ಜೂನ್-2022 ರೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು.

ಸಂಖ್ಯೆ:ಜಸಂಇ 61 ಎನ್‌ಎಲ್‌ಎ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ